**Bangalore**
**Regional News**
**31.10.2025: 1430hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು:**

1. ರಾಜ್ಯಾದ್ಯಂತ ಸರ್ದಾರ್ ವಲ್ಲಭ ಭಾಯ್ ಪಟೇಲ್ ೧೫೦ನೇ ಜನ್ಮದಿನ; ಏಕತಾ ದಿನವಾಗಿ ಆಚರಣೆ; ವಿಧಾನಸೌಧದಲ್ಲಿ ಮುಖ್ಯಮಂತ್ರಿ ಭಾಗಿ
2. ಇಂದು ಕೊನೆಗೊಳ್ಳಲಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ; ಆನ್‌ಲೈನ್‌ನಲ್ಲಿ ನವೆಂಬರ್ ೧೦ರ ವರೆಗೆ ಅವಧಿ ವಿಸ್ತರಣೆ
3. ಯಾದಗಿರಿ ರೈತರಿಂದ ಹತ್ತಿ ಖರೀದಿಗೆ ಜಿಲ್ಲಾಧಿಕಾರಿ ಸೂಚನೆ
4. ಶೃಂಗೇರಿ ಕೆರೆಕಟ್ಟೆ ಬಳಿ ಕಾಡಾನೆ ದಾಳಿಗೆ ಇಬ್ಬರ ಸಾವು

***********

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯಾದ ಇಂದು ದೇಶವು ಅವರಿಗೆ ಗೌರವ ಸಲ್ಲಿಸುತ್ತಿದೆ. ಈ ದಿನವನ್ನು ರಾಷ್ಟ್ರೀಯ ಏಕತಾ ದಿನ ಎಂದೂ ಆಚರಿಸಲಾಗುತ್ತದೆ, ಇದು ಸ್ವಾತಂತ್ರ್ಯದ ನಂತರ ಭಾರತವನ್ನು ಒಗ್ಗೂಡಿಸುವಲ್ಲಿ ಸರ್ದಾರ್ ಪಟೇಲ್ ವಹಿಸಿದ ಪಾತ್ರವನ್ನು ಸ್ಮರಿಸಲು ಅವಕಾಶ ಒದಗಿಸುತ್ತದೆ.ಸರ್ದಾರ್ ವಲಭಭಾಯ್ ಪಟೇಲ್ ಜನ್ಮ ದಿನದ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವಾಲಯದ ಅಧಿಕಾರಿಗಳು ಮತ್ತು ನೌಕರರಿಗೆ ರಾಷ್ಟ್ರೀಯ ಏಕತಾ ದಿನದ ಪ್ರತಿಜ್ಞಾ ವಚನ ಬೋಧಿಸಿದರು. ಇದಕ್ಕೂ ಮುನ್ನ ಮುಖ್ಯಮಂತ್ರಿ, ಸರ್ದಾರ್ ಪಟೇಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ, ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ.ರೇವಣ್ಣ, ಶಾಸಕ ಬಸವಂತಪ್ಪ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಸೇರಿದಂತೆ ಹಿರಿಯ ಅಧಿಕಾರಿಗಳು, ನೌಕರರು ಉಪಸ್ಥಿತರಿದ್ದರು. ರಾಜ್ಯದ ವಿವಿಧೆಡೆ ಇಂದು ರಾಷ್ಟ್ರೀಯ ಐಕ್ಯತಾ ದಿನಾಚರಣೆ, ಏಕತಾ ಓಟ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಬಳ್ಳಾರಿ ನಗರದಲ್ಲಿ ಪೊಲೀಸ್ ಇಲಾಖೆಯಿಂದ ಸಾರ್ವಜನಿಕರಲ್ಲಿ ನಾಗರಿಕರ ಸುರಕ್ಷತೆ ಮತ್ತು ಜವಾಬ್ದಾರಿಗಳ ಕುರಿತು ಅರಿವು ಮೂಡಿಸುವ ೫ ಕಿಲೋ ಮೀಟರ್ ದೂರ ಏಕತೆಗಾಗಿ ಓಟ ಎಂಬ ಮ್ಯಾರಥಾನ್ ಹಮ್ಮಿಕೊಂಡಿತ್ತು. ನಗರದ ಜಿಲ್ಲಾ ಸಶಸ್ತ್ರ ಪೊಲೀಸ್

ಕವಾಯತು ಮೈದಾನದಿಂದ ಆರಂಭಗೊಂಡ ಈ ಓಟದಲ್ಲಿ ನೂರಾರು ಪೊಲೀಸ್ ಸಿಬ್ಬಂದಿ, ಯುವಕರು, ನಾಗರಿಕರು ಪಾಲ್ಗೊಂಡಿದ್ದರು. ಓಟಕ್ಕೆ ಜಿಲ್ಲಾ ಎಸ್ಪಿ ಡಾ. ಶೋಭಾರಾಣಿ ಚಾಲನೆ ನೀಡಿ ಐಕ್ಯತೆಯ ಓಟದ ಜೊತೆ ಪ್ರಜಾಪ್ರಭುತ್ವದ ಬಗ್ಗೆ ಯುವ ಜನರಿಗೆ ತಿಳಿಸಲು, ಹಾಗು ಸೈಬರ್ ಕ್ರೈಂ, ಮಾದಕ ವಸ್ತು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಯುವ ಜನತೆಗೆ ಅರಿವನ್ನು ಸಹ ಮೂಡಿಸುವುದಾಗಿದೆ ಎಂದರು.

*****ಧ್ವನಿ****ಶೋಭಾರಾಣಿ

ಜಿಲ್ಲಾ ಪಂಚಾಯಿತಿ ಕಾರ್ಯ ನಿರ್ವಹಣಾ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ ಮಾತನಾಡಿ, ವಲ್ಲಭಭಾಯ್ ಪಟೇಲರ ಆಶಯದಂತೆ ನಾವೆಲ್ಲ ದೇಶದ ಐಕ್ಯತೆಯಿಂದ ನಡೆಯಬೇಕಿದೆ. ಸೈಬರ್ ಅಪರಾದದ ಬಗ್ಗೆ ತಿಳಿಯಲು ನಾವೀಗ ಡಿಜಿಟಲ್ ಸಾಕ್ಷರತೆಯನ್ನೂ ಸಹ ಹೊಂದಬೇಕು ಎಂದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಬಸವರಾಜ್ ಕೆ.ಎನ್. ಮಾತನಾಡಿದರು. ರಾಷ್ಟ್ರೀಯ ಏಕತಾ ದಿವಸ್ ಅಂಗವಾಗಿ ದಾವಣಗೆರೆಯಲ್ಲಿಂದು ಜಿಲ್ಲಾ ಪೊಲೀಸ್ ಇಲಾಖೆಯಿಂದ ಏಕತಾ ಓಟ ಹಮ್ಮಿಕೊಳ್ಳಲಾಗಿತ್ತು. ನಗರದ ಗುಂಡಿ ಮಹದೇವಪ್ಪ ವೃತ್ತದಿಂದ ಆರಂಭಗೊಂಡ ಓಟ ಪೊಲೀಸ್ ಕವಾಯತು ಮೈದಾನದಲ್ಲಿ ಮುಕ್ತಾಯಗೊಂಡಿತು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಇಲಾಖೆಯ ಸಿಬ್ಬಂದಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಐಕ್ಯತೆ ಮತ್ತು ಭದ್ರತೆಯನ್ನು ಬಲಪಡಿಸುವ ಉದ್ದೇಶದೊಂದಿಗೆ ವಿಜಯಪುರ ಜಿಲ್ಲಾ ಪೊಲೀಸ್ ಇಲಾಖೆ “ರಾಷ್ಟ್ರೀಯ ಏಕತಾ ದಿನ"ವನ್ನು ಆಚರಿಸಿತು. ಜಿಲ್ಲಾ ಪೊಲೀಸ್ ಘಟಕದ ಅಧಿಕಾರಿ ಮತ್ತು ಸಿಬ್ಬಂದಿಗಳು, ಐ.ಆರ್.ಬಿ ಘಟಕದ ಅಧಿಕಾರಿ ಮತ್ತು ಸಿಬ್ಬಂದಿಗಳು, ವಿವಿಧ ಶಾಲೆಗಳ ಮಕ್ಕಳೊಂದಿಗೆ ೨ ಕಿಲೋಮೀಟರ್ “ಏಕತಾ ಓಟ"ದಲ್ಲಿ ಭಾಗವಹಿಸಿದ್ದರು. ಸಾಮೂಹಿಕವಾಗಿ "ರಾಷ್ಟ್ರೀಯ ಏಕತಾ ದಿನಾಚರಣೆ" ಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು. ಮೈಸೂರಿನಲ್ಲಿ ಏಕತೆಗಾಗಿ ಓಟ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮೈಸೂರಿನ ನ್ಯಾಯಾಲಯದ ಮುಂಭಾಗದ ಗಾಂಧಿ ಪ್ರತಿಮೆಯಿಂದ ಚಾಲನೆಗೊಂಡ ಓಟದಲ್ಲಿ ಪಾಲ್ಗೊಂಡ ಅನೇಕರು ಮೈಸೂರಿನ ವಿವಿಧ ಕಡೆಗಳಲ್ಲಿ ಸಂಚರಿಸಿದರು. ಕಾರ್ಯಕ್ರಮಕ್ಕೆ ಶಾಸಕ ಟಿ ಎಸ್ ಶ್ರೀವತ್ಸ ಚಾಲನೆ ನೀಡಿ, ಉಕ್ಕಿನ ಮನುಷ್ಯ ಸರದಾರ ವಲ್ಲಭ ಭಾಯ್ ಪಟೇಲ್, ದೇಶವನ್ನು ಒಂದು ಮಾಡಿದ ನಾಯಕ, ಇಂತಹ ನಾಯಕನ ಜನ್ಮದಿನವನ್ನು ವಿಭಿನ್ನವಾಗಿ ಆಚರಿಸಬೇಕು ಎನ್ನುವುದಕ್ಕಾಗಿ ಇಂದು ಏಕತೆಗಾಗಿ ನಡಿಗೆ ಕಾರ್ಯಕ್ರಮ ಮಾಡಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

***********

ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಇಂದು ಮುಕ್ತಾಯವಾಗಲಿದೆ. ವಿವಿಧ ಕಾರಣಗಳಿಂದ ಸಮೀಕ್ಷೆಯಲ್ಲಿ ಭಾಗವಹಿಸಲು ಸಾಧ್ಯವಾಗದೇ ಇರುವವರಿಗೆ ಅವಕಾಶ ನೀಡುವ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ https://kscbcselfdeclaration.karnataka.gov.in ಲಿಂಕ್ ಬಳಸಿಕೊಂಡು ಸಮೀಕ್ಷೆಯಲ್ಲಿ ಸ್ವಯಂ ಪಾಲ್ಗೊಳ್ಳುವ ಅವಧಿಯನ್ನು ನವೆಂಬರ್ ೧೦ರ ವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

***********

ಯಾದಗಿರಿ ಜಿಲ್ಲೆಯಲ್ಲಿ ರೈತರಿಂದ ಹತ್ತಿಯನ್ನು ಖರೀದಿ ಕೇಂದ್ರಗಳಲ್ಲಿ ಖರೀದಿಸಲು ಸೂಕ್ತ ಕ್ರಮ ವಹಿಸಬೇಕು, ವ್ಯಾಪಾರಸ್ಥರು, ಮಧ್ಯವರ್ತಿಗಳು ರೈತರ ಹೆಸರಿನಲ್ಲಿ ಹತ್ತಿ ಉತ್ಪನ್ನವನ್ನು ಮಾರಾಟ ಮಾಡದಂತೆ ಎಲ್ಲಾ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸೂಚಿಸಿದರು. ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹತ್ತಿ ಗಿರಣಿಯ ಮಾಲೀಕರು, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಸಹಾಯಕ ನಿರ್ದೇಶಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಸಹಾಯಕ ನಿರ್ದೇಶಕರು, ಸಮಿತಿಯ ಕಾರ್ಯದರ್ಶಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಹತ್ತಿ ನಿಗಮದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

***********

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನ ಕೆರೆಕಟ್ಟೆ ಗ್ರಾಮದಲ್ಲಿ ಕಾಡಾನೆ ದಾಳಿಗೆ ಇಬ್ಬರು ರೈತರು ಮೃತಪಟ್ಟಿರುವ ಘಟನೆ ಇಂದು ಮುಂಜಾನೆ ನಡೆದಿದೆ. ಸ್ಥಳಕ್ಕೆ ಹಿರಿಯ ಅರಣ್ಯಾಧಿಕಾರಿಗಳು ಭೇಟಿ ನೀಡಿ ಪರಿಶಿಲನೆ ನಡೆಸಿದ್ದಾರೆ. ಮಲೆನಾಡು ಭಾಗದಲ್ಲಿ ಇತ್ತಿಚ್ಚೆಗೆ ಕಾಡಾನೆ ದಾಳಿಗಳು ಹೆಚ್ಚಾಗಿದ್ದು ಸರ್ಕಾರ ಕಾಡಾನೆಗಳ ಹಾವಳಿ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುವಂತೆ ಕುಟುಂಬಸ್ಥರು ಹಾಗು ಗ್ರಾಮಸ್ಥರು ಸ್ಥಳದಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಬೆಳಗ್ಗೆ ಮನೆಯಿಂದ ಹೊರಬಂದ ಹರೀಶ್ ಹಾಗು ಉಮೇಶ್ ಎಂಬ ಇಬ್ಬರು ರೈತರ ಮೇಲೆ ಕಾಡಾನೆ ದಾಳಿ ನಡೆಸಿದ್ದು ದಾಳಿಯಿಂದ ಇಬ್ಬರು ಸ್ಥಳದಲ್ಲಿಯೆ ಮೃತ ಪಟ್ಟಿದಾರೆ.

***********

ನಾಳೆಯಿಂದ ಹಂಪಿಗೆ ವಿಮಾನ ಸೇವೆ ಆರಂಭಗೊಳ್ಳಲಿದೆ. ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿರುವುದರಿಂದ ಪ್ರವಾಸೋದ್ಯಮಕ್ಕೆ ಇನ್ನಷ್ಟು ಬಲ ನೀಡುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆಯ ಜೊತೆಗೂಡಿ ಹಂಪಿಗೆ ವಿಮಾನ ಸೇವೆ ಒದಗಿಸಲು ಖಾಸಗಿ ಕಂಪನಿ ಮುಂದಾಗಿದೆ. ಬೆಳಿಗ್ಗೆ ೭:೫೦ ನಿಮಿಷಕ್ಕೆ ಬೆಂಗಳೂರಿನಿಂದ ಹೊರಡುವ ವಿಮಾನ ಎಂಟು ಗಂಟೆ ೪೦ ನಿಮಿಷಕ್ಕೆ ತೋರಣಗಲ್ಲಿನ ವಿಜಯನಗರ ನಿಲ್ದಾಣಕ್ಕೆ ಆಗಮಿಸಲಿದೆ. ಬೆಳಗ್ಗೆ ಒಂಬತ್ತು ಗಂಟೆ ೧೦ ನಿಮಿಷಕ್ಕೆ ಹಂಪಿಯಿಂದ ನಿರ್ಗಮಿಸಿ, ೧೦ ಗಂಟೆಗೆ ಬೆಂಗಳೂರು ತಲುಪಲಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಪ್ರಭುಲಿಂಗ ತಳಕೇರಿ ತಿಳಿಸಿದ್ದಾರೆ.

***********

ನಾಡಿನ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ಔದ್ಯೋಗಿಕ ಸ್ಥಿತಿಗತಿಗಳ ದತ್ತಾಂಶ ಸಂಗ್ರಹಿಸಿ ಮುಂದಿನ ಕಲ್ಯಾಣ ಯೋಜನೆಗಳ ರೂಪುರೇಶಗಳನ್ನು ನಿರ್ಧರಿಸಲು ಜಿಲ್ಲೆಯಾದ್ಯಂತ ಈಗಾಗಲೆ ಕಳೆದ ಸೆಪ್ಟೆಂಬರ್ ೨೨ ರಿಂದ ಆರಂಭವಾಗಿರುವ ಮನೆ-ಮನೆಗೆ ಭೇಟಿ ನೀಡಿ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಇಂದು ಮುಕ್ತಾಯವಾಗಲಿದ್ದು, ನಾನಾ ಕಾರಣದಿಂದ ಸಮೀಕ್ಷೆಯಿಂದ ಹೊರಗುಳಿದವರು ಸಮೀಪದ ಗ್ರಾಮ ಪಂಚಾಯತಿ, ತಾಲೂಕ ಪಂಚಾಯತಿ, ನಗರ-ಸ್ಥಳೀಯ ಸಂಸ್ಥೆ, ತಹಶೀಲ್ದಾರ ಕಚೇರಿಗೆ ಭೇಟಿ ನೀಡಿ ಸಮೀಕ್ಷೆಗೆ ಒಳಪಡಬಹುದಾಗಿದೆ.

***********

ಪ್ರಸ್ತುತ ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲೂ ಕೆಲಸ ಮಾಡುವುದರೊಂದಿಗೆ ಪುರುಷರಿಗೆ ಸಮಾನಾಗಿ ಸಾಧನೆಯತ್ತ ಮುಂಚೂಣಿಯಲ್ಲಿದ್ದಾರೆಂದು ಮಳವಳ್ಳಿ ತಾಲೂಕಿನ ತಹಶೀಲ್ದಾರ್ ಡಾ.ಎಸ್.ವಿ.ಲೋಕೇಶ್ ತಿಳಿಸಿದರು. ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ಕೇಂದ್ರ ಸಂವಹನ ಇಲಾಖೆ, ಮೈಸೂರು, ತಾಲೂಕು ಆಡಳಿತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ತಾಲೂಕು ಪಂಚಾಯತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಶಿಶು ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ ಪೋಷಣ್ ಮಾಸಾಚರಣೆ ಹಾಗೂ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

******END*****